# ಶರಣ ಶರಣ ಮಾಗನೂರು ಬಸಪ್ಪ ಪ್ರತಿಷ್ಠಾನ (ರಿ) ವತಿಯಿಂದ ವೈದ್ಯಕೀಯ/ದಂತ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಸಾಧು ಲಿಂಗಾಯತ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು

1) ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸಾಧು ಲಿಂಗಾಯತ ಸಮಾಜಕ್ಕೆ ಸೇರಿರಬೇಕು.

2) ಕರ್ನಾಟಕ ರಾಜ್ಯದ್ಯಾಂತ ಇರುವ ವೈದ್ಯಕೀಯ/ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಸರ್ಕಾರಿ ಕೋಟಾದಲ್ಲಿ ಪ್ರವೇಶ ಪಡೆದಿರುವ ಸಾಧು ಲಿಂಗಾಯತ ಸಮಾಜದ ವಿದ್ಯಾರ್ಥಿಗಳಾಗಿರಬೇಕು.

3) ಆರ್ಥಿಕವಾಗಿ ದುರ್ಬಲರಾಗಿರುವ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ (EWS)

4) ಕುಟುಂಬದಲ್ಲಿ ಯಾವುದೇ ಸದಸ್ಯರು ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಖಾಯಂ ನೌಕರರಾಗಿರಬಾರದು.

5) ಆರ್ಥಿಕವಾಗಿ ಹಿಂದುಳಿದ ಸಾಧು ಸಮಾಜದ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವನ್ನು ಪ್ರಥಮ ವರ್ಷದಿಂದ ನಾಲ್ಕು ವರ್ಷಗಳವರೆಗೆ ವಿದ್ಯಾರ್ಥಿಗಳಿಗೆ ನೀಡಲಾಗುವುದು.

6) ಪ್ರಥಮ ವರ್ಷದ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಅಂಕಪಟ್ಟಿ, ಆಧಾರ್ ಕಾರ್ಡ್ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜಿನ ದಾಖಲಾತಿ ರಸೀದಿಗಳು ಮತ್ತು ನೀಟ್ ರ್‍ಯಾಂಕಿಂಗ್ ಜೆರಾಕ್ಸ್ ಪ್ರತಿಗಳ ಜೊತೆಗೆ ತಮ್ಮ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಲಗತ್ತಿಸಬೇಕು.

7) ಈ ಹಿಂದೆ ನಮ್ಮ ಪ್ರತಿಷ್ಠಾನದಿಂದ ವಿದ್ಯಾರ್ಥಿ ವೇತನ ಪಡೆದಿರುವ ವಿದ್ಯಾರ್ಥಿಗಳು ಎರಡು, ಮೂರು ಮತ್ತು ನಾಲ್ಕನೇ ವರ್ಷದ ವೈದ್ಯಕೀಯ/ದಂತ ವೈದ್ಯಕೀಯ ವಿದ್ಯಾರ್ಥಿಗಳು ಹಿಂದಿನ ವರ್ಷದ ಅಂಕಪಟ್ಟಿ ಮತ್ತು ಪ್ರಸ್ತುತ ಸಾಲಿನ ಕಾಲೇಜಿನ ಶುಲ್ಕದ ರಶೀದಿಯ ಜೆರಾಕ್ಸ್ ಪ್ರತಿಗಳ ಜೊತೆಗೆ ತಮ್ಮ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಲಗತ್ತಿಸಬೇಕು.

8) ನಿಮ್ಮ ಊರಿನ ಸಾಧು ಲಿಂಗಾಯತ ಸಮಾಜದ ಇಬ್ಬರು ಪ್ರಮುಖ ವ್ಯಕ್ತಿಗಳ ವಿಳಾಸ ಮತ್ತು ದೂರವಾಣಿ ಸಂಖ್ಯೆಯನ್ನು ನಮೂದಿಸಿರಬೇಕು.

9) ನಿಮ್ಮ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಬೇಕು.

10) ವಿದ್ಯಾರ್ಥಿ ವೇತನವು ಮುಂದಿನ ವರ್ಷಕ್ಕೆ ಮುಂದುವರಿಯಬೇಕಾದರೆ ಹಿಂದಿನ ವರ್ಷದ ಫಲಿತಾಂಶದಲ್ಲಿ ಶೇಕಡ 50% ರಷ್ಟು ಅಂಕಗಳನ್ನು ಗಳಿಸಿ ಉತ್ತೀರ್ಣರಾಗಿರಬೇಕು.

11) ವಿದ್ಯಾರ್ಥಿವೇತನದ ಅರ್ಜಿಯನ್ನು ಈ ಕೆಳಕಂಡ ವೆಬ್‌ಸೈಟ್ ವಿಳಾಸದಿಂದ ಡೌನ್ ಲೋಡ್ ಮಾಡಿಕೊಂಡು ನಿಗದಿತ ಅರ್ಜಿಯನ್ನು ಭರ್ತಿ ಮಾಡಿ ದಾಖಲಾತಿಗಳನ್ನು ಲಗತ್ತಿಸಿ ಈ ಕೆಳಕಂಡ ಪ್ರತಿಷ್ಠಾನದ ವಿಳಾಸಕ್ಕೆ ಕಳಿಸಿಕೊಡುವುದು ಅಥವಾ ಇ-ಮೇಲ್ ಮುಖಾಂತರ ಕೂಡ ಕಳಿಸಿಕೊಡುವುದು.


ಪ್ರತಿಷ್ಠಾನದ ವಿಳಾಸ: ಶರಣ ಮಾಗನೂರು ಬಸಪ್ಪ ಪ್ರತಿಷ್ಠಾನ (ರಿ)<br>
ನಂ. 963, 'ಬಸವ ಸದನ' ತರಳಬಾಳು ಬಡಾವಣೆ,<br>
ದಾವಣಗೆರೆ-577005<br>
ದೂರವಾಣಿ ಸಂಖ್ಯೆ : 9844860466

ವೆಬ್ ಸೆಟ್ ವಿಳಾಸ: **mbpt.org**

**E-mail ID:** sharanamaganurbasappaprati@gmail.com


12) ವಿದ್ಯಾರ್ಥಿವೇತನವನ್ನು ಮಂಜೂರು ಮಾಡುವಲ್ಲಿ ಶರಣ ಮಾಗನೂರು ಬಸಪ್ಪ ಪ್ರತಿಷ್ಠಾನದ ತೀರ್ಮಾನವೇ ಅಂತಿಮವಾಗಿರುತ್ತದೆ.

ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ : 15-03-2026

****